**ಶ್ರೀ ಕೆ.ಟಿ.ಶ್ರೀಕಂಠೇಗೌಡ, ವಿಧಾನ ಪರಿಷತ್ತಿನ ಸದಸ್ಯರು ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಉಪಮುಖ್ಯಮಂತ್ರಿಗಳು, ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಸಚಿವರ ಹೇಳಿಕೆ:-**

**ವಿಷಯ: ರಾಜ್ಯದಲ್ಲಿ ಗಂಗಾಕಲ್ಯಾಣ ಯೋಜನೆಯಡಿಯಲ್ಲಿ ಕೊರೆಯಿಸಲಾದ ಅನೇಕ ಕೊಳವೆ ಬಾವಿಗಳಿಗೆ ಇದುವರೆವಿಗೂ ವಿದ್ಯುತ್ ಸಂಪರ್ಕ ನೀಡದೇ ಅವುಗಳಿಗೆ ಸಬ್‌ಮರ್ಷಿಬಲ್ ಪಂಪ್‌ಗಳನ್ನು ಅಳವಡಿಸಲು ಆಗದೇ ಇರುವುದರಿಂದ ನೀರಿನ ಮೂಲ ಸಂಪೂರ್ಣವಾಗಿ ಬೇರೆ ಕಡೆಗೆ ಡೈವರ್ಟ್ ಆಗಿ ಕೋಟ್ಯಾಂತರ ರೂಪಾಯಿ ಖರ್ಚು ಮಾಡಿ ಕೊರೆಯಿಸಿರುವ ಕೊಳವೆ ಬಾವಿಗಳು ವಿಫಲವಾಗುತ್ತಿರುವ ಬಗ್ಗೆ.**

******

**ಉತ್ತರ:-** ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರ ಆರ್ಥಿಕ ಸಬಲೀಕರಣಕ್ಕಾಗಿ ಫಲಾನುಭವಿ ಆಧಾರಿತ ಯೋಜನೆಯಾದ ಗಂಗಾ ಕಲ್ಯಾಣ ಯೋಜನೆಯಡಿ 1½ ಎಕರೆಯಿಂದ 5.00 ಎಕರೆ ಜಮೀನು ಹೊಂದಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಮತ್ತು ಅತೀ ಸಣ್ಣ ರೈತರ ಜಮೀನಿನಲ್ಲಿ ಕೊಳವೆಬಾವಿ ಕೊರೆಸಿ, ಪಂಪ್‌ಸೆಟ್ ಅಳವಡಿಸಿ, ವಿದ್ಯುದ್ಧೀಕರಣಗೊಳಿಸಿ ನೀರಾವರಿ ಸೌಲಭ್ಯ ಕಲ್ಪಿಸಲಾಗುತ್ತಿದೆ. ಮಲೆನಾಡು ಪ್ರದೇಶಗಳಾದ ಕೊಡಗು, ದಕ್ಷಿಣಕನ್ನಡ, ಉಡುಪಿ, ಕಾರವಾರ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಲ್ಲಿ 1.00 ಎಕರೆ ಜಮೀನು ಹೊಂದಿರುವವರಿಗೂ ನೀರಾವರಿ ಸೌಲಭ್ಯ ಒದಗಿಸಲಾಗುತ್ತಿದೆ.

ಈ ಯೋಜನೆಯಡಿ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು(ಗ್ರಾ), ಬೆಂಗಳೂರು(ನಗರ), ತುಮಕೂರು ಮತ್ತು ರಾಮನಗರ ಜಿಲ್ಲೆಗಳಲ್ಲಿ ಅಂತರ್ಜಲ ಮಟ್ಟ ಕೆಳಗೆ ಕುಸಿದಿರುವುದರಿಂದ ಈ ಜಿಲ್ಲೆಗಳಲ್ಲಿ ಘಟಕ ವೆಚ್ಚವನ್ನು ಪರಿಷ್ಕರಿಸಲಾಗಿದ್ದು, ರೂ.4.50 ಲಕ್ಷಕ್ಕೆ ಹೆಚ್ಚಿಸಲಾಗಿದ್ದು, ಇದರಲ್ಲಿ ರೂ. 4.00 ಲಕ್ಷ ಸಹಾಯಧನವಿದ್ದು, ಉಳಿದ ರೂ.50,000/- ಅವಧಿ ಸಾಲವಾಗಿರುತ್ತದೆ. ಇತರೆ ಜಿಲ್ಲೆಗಳಲ್ಲಿ ಘಟಕ ವೆಚ್ಚ ರೂ.3.50 ಲಕ್ಷ ನಿಗದಿಪಡಿಸಿದ್ದು, ಇದರಲ್ಲಿ ರೂ.3.00 ಲಕ್ಷ ಸಹಾಯದನ ಮತ್ತು ರೂ.0.50 ಲಕ್ಷ ಅವಧಿ ಸಾಲವಾಗಿರುತ್ತದೆ. ಸಹಾಯಧನದಲ್ಲಿ ವಿದ್ಯುದ್ಧೀಕರಣಕ್ಕೆ ಪ್ರತ್ಯೇಕವಾಗಿ ಪ್ರತಿ ಕೊಳವೆಬಾವಿಗೆ ರೂ.50,000/-ಗಳನ್ನು ಸಂಬಂಧಿಸಿದ ಎಸ್ಕಾಂಗಳಿಗೆ ಬಿಡುಗಡೆ ಮಾಡಲಾಗುತ್ತಿದೆ.

ಕಳೆದ 03 ವರ್ಷಗಳಿಂದ ರಾಜ್ಯಾದ್ಯಂತ ಈ ಕೆಳಕಂಡಂತೆ ಕೊಳವೆ ಬಾವಿಗಳನ್ನು ಕೊರೆಯಿಸಿ, ಪಂಪ್‌ಸೆಟ್ ಅಳವಡಿಸಿ, ವಿದ್ಯುದ್ಧೀಕರಣ ಕಲ್ಪಿಸಲಾಗಿದೆ.

| ಕ್ರ ಸಂ | ವಿವರ | ಪರಿಶಿಷ್ಟ ಜಾತಿ | ಪರಿಶಿಷ್ಟ ಪಂಗಡ |
|---|---|---|---|
| 1 | ಕೊಳವೆ ಬಾವಿ ಕೊರೆಸಿರುವುದು | 29747 | 13035 |
| 2 | ಪಂಪ್‌ಸೆಟ್ ಮತ್ತು ಪೂರಕ ಸಾಮಗ್ರಿಗಳ ಅಳವಡಿಸಿರುವುದು | 28703 | 12186 |
| 3 | ಪಂಪ್‌ಸೆಟ್ ಅಳವಡಿಕೆ ಬಾಕಿ | 1044 | 849 |
| 4 | ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಿರುವುದು | 21436 | 9794 |
| 5 | ವಿದ್ಯುತ್ ಸಂಪರ್ಕಕ್ಕೆ ಬಾಕಿ ಇರುವುದು | 7267 | 3241 |

ಗಂಗಾ ಕಲ್ಯಾಣ ಯೋಜನೆಯಡಿ ಕೊರೆದ ಕೊಳವೆಬಾವಿಗಳನ್ನು ಎಸ್ಕಾಂಗಳಲ್ಲಿ ನೋಂದಣಿ ಮಾಡಿಸಿ, ನಿಗಮದಿಂದ ವೈ.ಎಂ.ಡಿ / ಎಂ.ಎಸ್.ಡಿ ಮೊತ್ತವನ್ನು ಪಾವತಿ ಮಾಡಲಾಗುತ್ತಿದೆ. ಅಲ್ಲದೆ ಎಲ್ಲಾ ಎಸ್ಕಾಂಗಳಿಗೆ ಪ್ರತಿ ಕೊಳವೆಬಾವಿಗಳಿಗೆ ರೂ.50,000/-ದಂತೆ ವಿದ್ಯುದ್ಧೀಕರಣದ ವೆಚ್ಚವನ್ನು ನಿಗಮದಿಂದ ಪಾವತಿಸಲಾಗುತ್ತಿದ್ದು, ಎಸ್ಕಾಂಗಳಿಂದ ವಿದ್ಯುದ್ಧೀಕರಣಗೊಳಿಸುವ ಕಾರ್ಯ ಪ್ರಗತಿಯಲ್ಲಿರುತ್ತದೆ. **ಪ್ರಸಕ್ತ ಸಾಲಿನಲ್ಲಿ ಏಪ್ರಿಲ್ ಯಿಂದ ಸೆಪ್ಟಂಬರ್ 2019ರ ಅಂತ್ಯದವರೆಗೆ ಪರಿಶಿಷ್ಟ ಜಾತಿಯ 2055 ಹಾಗೂ ಪರಿಶಿಷ್ಟ ಪಂಗಡದ 2929 ಒಟ್ಟು 4954 ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ.**

ನಿಗಮದ ಜಿಲ್ಲಾ ವ್ಯವಸ್ಥಾಪಕರು ಹಾಗೂ ಎಸ್ಕಾಂನ ಅಧಿಕಾರಿಗಳು ಪ್ರತಿ ಮಾಹೆ ಸಮನ್ವಯ ಸಭೆ ನಡೆಸಿ ವಿದ್ಯುತ್ ಸಂಪರ್ಕ ಕಲ್ಪಿಸಲು ಕ್ರಮವಹಿಸಲಾಗುತ್ತಿದೆ. ಅಲ್ಲದೇ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಮಾಸಿಕ ಹಾಗೂ ತ್ರೈಮಾಸಿಕ ಕೆ.ಡಿ.ಪಿ ಸಭೆಗಳಲ್ಲಿ ಈ ವಿಷಯವನ್ನು ಪ್ರಮುಖ ವಿಷಯವಾಗಿ ಚರ್ಚಿಸಿ, ತ್ವರಿತವಾಗಿ ವಿದ್ಯುದೀಕರಣಗೊಳಿಸಲು ಕ್ರಮವಹಿಸಲಾಗುತ್ತಿದೆ.

ಕೊಳವೆ ಬಾವಿ ವಿದ್ಯುದ್ದೀಕರಣಗೊಂಡ ದಿನಾಂಕದಿಂದ ಒಂದು ವರ್ಷದ ಗ್ಯಾರಂಟಿ ಅವಧಿ ಇದ್ದು, ಈ ಅವಧಿಯಲ್ಲಿ ಕೊಳವೆ ಬಾವಿಯಲ್ಲಿ ನೀರಿಲ್ಲದೇ ವಿಫಲವಾದಲ್ಲಿ, ಗುತ್ತಿಗೆದಾರರ ವೆಚ್ಚದಿಂದಲೇ ಬದಲಿ ಕೊಳವೆ ಬಾವಿ ಕೊರೆಸಲಾಗುವುದು.

**ಸಕಇ 283 ಎಸ್‌ಡಿಸಿ 2019**

(ಗೋವಿಂದ ಕಾರಜೋಳ)
ಉಪಮುಖ್ಯಮಂತ್ರಿಗಳು ಹಾಗೂ
ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು